ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಪ್ರಸಕ್ತ ಸಾಲಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯಕ್ಕೆ ಮೀಸಲಿಟ್ಟ ಹಣ ಕುರಿತು

ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

466(538) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ಸಾಲಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಗೆ ಮೀಸಲಿಟ್ಟ ಹಣವೆಷ್ಟು; ಎಷ್ಟು ಅನುದಾನ ಬಳಕೆಯಾಗಿದೆ; ಹಾಗೂ ಎಷ್ಟು ಗುರಿ ಸಾಧಿಸಲಾಗಿದೆ;

(ಆ) ಸುವರ್ಣ ಗ್ರಾಮೋದಯ ಮತ್ತು ಗ್ರಾಮ ವಿಕಾಸ ಕಾರ್ಯಕ್ರಮಗಳಿಗೆ ಕಳೆದ ಎರಡು ವರ್ಷಗಳಿಂದ ಎಷ್ಟು ಹಣ ಮೀಸಲಿಡಲಾಗಿದೆ; ಎಷ್ಟು ಪ್ರಗತಿ ಸಾಧಿಸಲಾಗಿದೆ; (ವಿವರ ನೀಡುವುದು)

(ಇ) ಕಳೆದೆರಡು ಸಾಲಿನಲ್ಲಿ ಗ್ರಾಮೀಣ ಮೂಲ ಸೌಕರ್ಯ, ಸೌರ ಬೆಳಕು ಮತ್ತು ರಾಷ್ಟ್ರೀಯ ಜೈವಿಕ ಅನಿಲ ಮತ್ತು ಗೊಬ್ಬರ ನಿರ್ವಹಣಾ ಕಾರ್ಯಕ್ರಮಗಳ ಆನ್‌ಲೈನ್ ಸೇವೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ; (ಮಾಹಿತಿ ನೀಡುವುದು)

(ಈ) ಪ್ರಸಕ್ತ ಸಾಲಿನಲ್ಲಿ ರಾಜ್ಯದ ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ ಮೀಸಲಿಟ್ಟ ಹಣವೆಷ್ಟು; ಬಳಕೆಯಾದ ಹಣವೆಷ್ಟು; ಸಾಧಿಸಲಾದ ಪ್ರಗತಿಯ ಪ್ರಮಾಣವೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)